# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2021-22ರ ಸಾಲಿನ ಸ್ನಾತಕ ಪದವಿ ಪ್ರವೇಶಾತಿ ಕುರಿತಂತೆ ಕೃಷಿಕರ/ ಕೃಷಿ ಕಾರ್ಮಿಕರ ಮಕ್ಕಳ ಕೋಟಾದಡಿ ಪ್ರವೇಶ ನೀಡಲು ಪ್ರಾಯೋಗಿಕ ಪರೀಕ್ಷೆಯನ್ನು, ಕೋವಿಡ್-19 ಸಾಂಕ್ರಾಮಿಕ ರೋಗದ 2ನೇ ಅಲೆ ಹಿನ್ನೆಲೆಯಲ್ಲಿ ರದ್ದು ಮಾಡುವ ಬಗ್ಗೆ.

**ಓದಲಾಗಿದೆ:-**
1) ಸರ್ಕಾರದ ಆದೇಶ ಸಂಖ್ಯೆ: AGRI-AUM/30/2020, ದಿನಾಂಕ: 20-08-2020.
2) ಕುಲಸಚಿವರು, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಕೃವಿವಿಬೆಂ/ಶೈಕ್ಷಣಿಕ/ಪ್ರಾ.ಪ/2021-22, ದಿನಾಂಕ: 15-06-2021.

******

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದ 2ನೇ ಅಲೆಯ ಹಿನ್ನೆಲೆಯಲ್ಲಿ, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳ 2020-21ರ ಸಾಲಿನ ಸ್ನಾತಕ ಪದವಿ ಪ್ರವೇಶಾತಿ ಕುರಿತಂತೆ ಕೃಷಿಕರ / ಕೃಷಿ ಕಾರ್ಮಿಕರ ಮಕ್ಕಳ ಕೋಟಾದಡಿ ಪ್ರವೇಶ ನೀಡಲು ನಡೆಸಲಾಗುವ ಪ್ರಾಯೋಗಿಕ ಪರೀಕ್ಷೆಯನ್ನು 2020-21ರ ಸಾಲಿಗೆ ಮಾತ್ರ ಅನ್ವಯಿಸುವಂತೆ ರದ್ದುಪಡಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಕೋವಿಡ್ ಸಾಂಕ್ರಾಮಿಕ ರೋಗದ 2ನೇ ಅಲೆಯ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು 2020-21ನೇ ಸಾಲಿನಲ್ಲಿ ನಡೆಸಬೇಕಾದ ದ್ವಿತೀಯ ಪಿ.ಯು.ಸಿ. ಪರೀಕ್ಷೆಗಳನ್ನು ರದ್ದುಪಡಿಸಿರುತ್ತದೆ. ಆದ್ದರಿಂದ, 2021-22ನೇ ಸಾಲಿನಲ್ಲಿ ಕೃಷಿ / ಕೃಷಿ ಪೂರಕ ವಿಶ್ವವಿದ್ಯಾಲಯಗಳು ಕೃಷಿ ಕೋಟಾದ ಸೀಟುಗಳ ಹಂಚಿಕೆಗಾಗಿ ನಡೆಸಬೇಕಾಗಿರುವ ಪ್ರಾಯೋಗಿಕ ಪರೀಕ್ಷೆಗಳನ್ನು ರದ್ದುಪಡಿಸಿ, ಸದರಿ ಸೀಟುಗಳನ್ನು ಹಂಚಿಕೆ ಮಾಡಲು ಪ್ರಸ್ತಾಪಿಸಿ, ಮಾರ್ಗಸೂಚಿಗಳೊಂದಿಗೆ ಸೂಕ್ತ ಆದೇಶವನ್ನು ಹೊರಡಿಸಬೇಕೆಂದು ಕೃಷಿ ಮತ್ತು ಕೃಷಿ ಪೂರಕ ವಿಶ್ವವಿದ್ಯಾಲಯಗಳ ಪರವಾಗಿ ಕುಲಸಚಿವರು, ಬೆಂಗಳೂರು ಕೃಷಿ ವಿಶ್ವವಿದ್ಯಾಲಯ ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಪ್ರಸ್ತುತ ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದ 2ನೇ ಅಲೆಯ ಹಿನ್ನೆಲೆಯಲ್ಲಿ 2021-22ರ ಸಾಲಿನ ಸ್ನಾತಕ ಪದವಿ ಪ್ರವೇಶಾತಿ ಕುರಿತಂತೆ ಕೃಷಿಕರ/ ಕೃಷಿ ಕಾರ್ಮಿಕರ ಮಕ್ಕಳ ಕೋಟಾದಡಿ ಪ್ರವೇಶ ನೀಡಲು ಸಹಸ್ರಾರು ಅಭ್ಯರ್ಥಿಗಳನ್ನು ಪ್ರಾಯೋಗಿಕ ಪರೀಕ್ಷೆಗಾಗಿ ಒಂದೆಡೆ ಸೇರಿಸುವುದು ಸೂಕ್ತವಲ್ಲ ಹಾಗೂ ಪ್ರಾಯೋಗಿಕ ಪರೀಕ್ಷೆಯನ್ನು ಆನ್‌ಲೈನ್ ಮೂಲಕ ನಡೆಸಲು ಸಾಧ್ಯವಿರದ ಕಾರಣ, 2021-22ರ ಸಾಲಿಗೆ ಮಾತ್ರ ಅನ್ವಯಿಸುವಂತೆ ಸ್ನಾತಕ ಪದವಿ ಪ್ರವೇಶಾತಿ ಕುರಿತಂತೆ ಕೃಷಿಕರ/ ಕೃಷಿ ಕಾರ್ಮಿಕರ ಮಕ್ಕಳ ಕೋಟಾದಡಿ ಪ್ರವೇಶ ನೀಡಲು ನಡೆಸಲಾಗುವ ಪ್ರಾಯೋಗಿಕ ಪರೀಕ್ಷೆಯನ್ನು ರದ್ದುಪಡಿಸಲು ನಿರ್ಧರಿಸಲಾಗಿರುತ್ತದೆ. ಮುಂದುವರೆದು, ಪ್ರಸಕ್ತ 2021-22ನೇ ಸಾಲಿಗೆ ಮಾತ್ರ ಅನ್ವಯಿಸುವಂತೆ ಕೃಷಿಕರ ಕೋಟಾದಡಿಯಲ್ಲಿ ಅರ್ಹ ಅಭ್ಯರ್ಥಿಗಳಿಗೆ ಪ್ರವೇಶಾತಿಗೆ ವಿಶೇಷ ನಿಯಮಗಳು/ಮಾರ್ಗಸೂಚಿಗಳನ್ನು ರಚಿಸಿ ಪ್ರವೇಶಾತಿ ಪ್ರಕ್ರಿಯೆಯನ್ನು ನಡೆಸಲು ತೀರ್ಮಾನಿಸಲಾಗಿದ್ದು, ಅದರನ್ವಯ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: AGRI-AUM/11/2021, ಬೆಂಗಳೂರು, ದಿನಾಂಕ: 19-07-2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಪ್ರಸ್ತುತ ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳ

....2

19/7

2021-22ರ ಸಾಲಿನ ಸ್ನಾತಕ ಪದವಿ ಪ್ರವೇಶಾತಿ ಕುರಿತಂತೆ ಕೃಷಿಕರ / ಕೃಷಿ ಕಾರ್ಮಿಕರ ಮಕ್ಕಳ ಕೋಟಾದಡಿ ಪ್ರವೇಶ ನೀಡಲು ನಡೆಸಲಾಗುವ ಪ್ರಾಯೋಗಿಕ ಪರೀಕ್ಷೆಯನ್ನು 2021-22ರ ಸಾಲಿಗೆ ಮಾತ್ರ ಅನ್ವಯಿಸುವಂತೆ ರದ್ದುಪಡಿಸಿ ಆದೇಶಿಸಿದೆ.

ಮುಂದುವರೆದು, ಪ್ರಸಕ್ತ 2021-22ನೇ ಸಾಲಿಗೆ ಮಾತ್ರ ಅನ್ವಯಿಸುವಂತೆ ಕೃಷಿಕರ /ಕೃಷಿ ಕಾರ್ಮಿಕರ ಕೋಟಾದಡಿಯಲ್ಲಿ ಅರ್ಹ ಅಭ್ಯರ್ಥಿಗಳ ಪ್ರವೇಶಾತಿಗೆ ಈ ಕೆಳಕಂಡ ನಿಯಮಗಳು/ಮಾರ್ಗಸೂಚಿಗಳನ್ನು ಅಳವಡಿಸಿಕೊಂಡು ಪ್ರವೇಶಾತಿ ಪ್ರಕ್ರಿಯೆ ನಡೆಸಲು ಆದೇಶಿಸಿದೆ.

1) ಕೃಷಿಕರ ಕೋಟಾದಡಿ ಪ್ರವೇಶಾತಿ ಪಡೆಯಲು ಅರ್ಹ ಅಭ್ಯರ್ಥಿಗಳು ಅಗತ್ಯವಾಗಿ ಪರಿಶೀಲನೆಗೆ ಒದಗಿಸಬೇಕಾಗಿದ್ದ ಮೂಲ ದಾಖಲಾತಿಗಳನ್ನು ಸ್ಕ್ಯಾನಿಂಗ್ ಮಾಡಿ, ಆಯಾ ವಿಶ್ವವಿದ್ಯಾಲಯಗಳ ವ್ಯಾಪ್ತಿಗೆ ಬರುವ ಜಿಲ್ಲೆಗಳ ಅಭ್ಯರ್ಥಿಗಳು ಆಯಾ ವಿಶ್ವವಿದ್ಯಾಲಯದ ವೆಬ್‌ಸೈಟ್‌ಗೆ ಆನ್‌ಲೈನ್ (Online) ಮುಖಾಂತರ ಅಪ್‌ಲೋಡ್ (Upload) ಮಾಡುವುದು.
2) ಸಂಬಂಧಿತ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳು ದಾಖಲಾತಿಗಳ ಪರಿಶೀಲನೆಯ ನಂತರ ಅರ್ಹತೆ ಪಡೆದ ಅಭ್ಯರ್ಥಿಗಳ ಪ್ರತ್ಯೇಕ ಪಟ್ಟಿಯನ್ನು ತಯಾರಿಸಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ (KEA) ಕಳುಹಿಸಿಕೊಡುವುದು.
3) ಪ್ರಕಟಿತ ಅಂಕಗಳ ಆಧಾರದ ಮೇಲೆ ಮೆರಿಟ್ ಪಟ್ಟಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ಪ್ರಕಟಿಸುವುದು ಮತ್ತು ಬಿ.ಎಸ್ಸಿ ಮತ್ತು ತತ್ಸಮಾನ ಕೋರ್ಸ್‌ಗಳಲ್ಲಿ ಕೃಷಿಕರ ಮತ್ತು ಕೃಷಿ ಕಾರ್ಮಿಕರ ಮಕ್ಕಳ ಕೋಟಾವನ್ನು ಸರ್ಕಾರದ ಆದೇಶದಂತೆ ಭರ್ತಿ ಮಾಡುವುದು.
4) 2021-22ನೇ ಸಾಲಿನ ಕೃಷಿಕರ ಮತ್ತು ಕೃಷಿ ಕಾರ್ಮಿಕರ ಮಕ್ಕಳ ಕೋಟಾದಡಿಯಲ್ಲಿ ಅರ್ಜಿ ಸಲ್ಲಿಸಲು ಯಾವುದೇ ಕನಿಷ್ಠ ಅಂಕಗಳನ್ನು ನಿಗದಿಪಡಿಸಿಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಫೀ ಅಹಮದ್ ಎಂ.ಎಸ್)
ಸರ್ಕಾರದ ಉಪ ಕಾರ್ಯದರ್ಶಿ-1,
ಕೃಷಿ ಇಲಾಖೆ

19/7

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

ಪ್ರತಿಗಳನ್ನು:
1) ಪ್ರಧಾನ ಮಹಾಲೇಖಪಾಲರು, ಕರ್ನಾಟಕ ವೃತ್ತ (ಲೆಕ್ಕಪತ್ರ/ತನಿಖೆ) ಬೆಂಗಳೂರು.
2) ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.

4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು-01.
5) ಸರ್ಕಾರದ ಪ್ರಧಾನ ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-01.
6) ಸರ್ಕಾರದ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-01.
7) ಆಯುಕ್ತರು / ನಿರ್ದೇಶಕರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು-01.
8) ಕಾರ್ಯಕಾರಿ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು.
9) ವಿಶೇಷಾಧಿಕಾರಿ, ಸಾಮಾನ್ಯ ಪ್ರವೇಶಾತಿ ಘಟಕ, ಮಲ್ಲೇಶ್ವರಂ, ಬೆಂಗಳೂರು.
10) ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು-01.
11) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-01.
12) ಕುಲಪತಿಗಳು/ಕುಲಸಚಿವರು, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು/ ಧಾರವಾಡ/ ರಾಯಚೂರು.
13) ಕುಲಪತಿಗಳು/ಕುಲಸಚಿವರು, ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ.
14) ಕುಲಪತಿಗಳು/ ಕುಲಸಚಿವರು, ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟೆ.
15) ಕುಲಪತಿಗಳು/ಕುಲಸಚಿವರು, ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ್.
16) ಸರ್ಕಾರದ ಉಪ ಕಾರ್ಯದರ್ಶಿ-1 ಮತ್ತು 2 ರವರ ಆಪ್ತ ಸಹಾಯಕರು, ಕೃಷಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-01.
17) ನೋಡಲ್ ಅಫೀಸರ್, ಇ-ಗೆಜೆಟ್, ಕೃಷಿ-ಬಿ ಶಾಖೆ, ಕೃಷಿ ಇಲಾಖೆ (ಸದರಿ ಆದೇಶವನ್ನು ಇ-ಗೆಜೆಟ್‌ನಲ್ಲಿ ಪ್ರಕಟಿಸಲು)
18) ಕಛೇರಿ ಪ್ರತಿ. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿಗಳು.